ವಿಜಾಪುರ ಜಿಲ್ಲೆಯಲ್ಲಿ ಪ್ರಾಥಮಿಕ ಶಿಕ್ಷಕರ ನೇಮಕಾತಿ

೧೩೦. ಶ್ರೀ ಜಿ. ಎನ್. ಬಾಗಲಕೋಟಿ (ಜಮಖಂಡಿ).—ಮಾನ್ಯ ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

(ಅ) ವಿಜಾಪುರ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ ಎಷ್ಟು ?

(ಆ) ಜಮಖಂಡಿ ತಾಲ್ಲೂಕಿನಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು ?

(ಇ) ಹಾಗಿದ್ದಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರದವರು ಕ್ರಮ ಕೈಗೊಳ್ಳುವರೇ ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಸಚಿವರು).—

(ಅ) ೧೦೮.

(ಆ) ೧೨.

(ಇ) ದಿನಾಂಕ ೧೦ನೇ ಏಪ್ರಿಲ್ ೧೯೮೫ ಮತ್ತು ಹಿಂದೆ ಸೇವೆಯಲ್ಲಿದ್ದು ಬಿಡುಗಡೆ ಹೊಂದಿರುವ ಗಂತ್ಯಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿದ್ದ ಅಭ್ಯರ್ಥಿಗಳನ್ನು ನೇಮಿಸುವುದರ ಮೂಲಕ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗದಗ್ ತಾಲ್ಲೂಕು ಕಣಗಿನಹಾಳ ಗ್ರಾಮಕ್ಕೆ ಕುಡಿಯುವ ನೀರಿನ ಯೋಜನೆ

೧೫೬೦. ಶ್ರೀ ಜ್ಞಾನದೇವ ದೊಡ್ಡಮೇಟಿ (ರೋಣ).—ಮಾನ್ಯ ಗ್ರಾಮಾಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಸಕ್ಕರೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

(ಅ) ಧಾರವಾಡ ಜಿಲ್ಲೆಯ ಗದಗ ತಾಲ್ಲೂಕು ಕಣಗಿನಹಾಳ ಗ್ರಾಮದ ಜನರು ಕುಡಿಯುವ ನೀರಿನ ಬವಣೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

(ಆ) ಹಾಗಿದ್ದಲ್ಲಿ ಬವಣೆಯನ್ನು ನೀಗಿಸಲು ಸರ್ಕಾರದವರು ಏನಾದರೂ ಕ್ರಮ ತೆಗೆದುಕೊಂಡಿರುವರೆ ? ಹಾಗಿದ್ದಲ್ಲಿ ಕುಡಿಯುವ ನೀರನ್ನು ಯಾವಾಗ ಒದಗಿಸಲಾಗುವುದು ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮಾಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು).—

(ಅ) ಬಂದಿದೆ.

(ಆ) ಕೊಳವೆ ಬಾವಿಗಳಿಗೆ ಕೈಪಂಪು ಅಳವಡಿಸಿ ನೀರು ಸರಬರಾಜು ಮಾಡಲಾಗುತ್ತಿದೆ. ಈ ಗ್ರಾಮಕ್ಕೆ ಕೊಳವೆ ನೀರು ಸರಬರಾಜು ಯೋಜನೆಯಂ ಮಂಜೂರಾಗಿದ್ದು ಒಂದು ಕೊಳವೆ ಬಾವಿಯನ್ನು ತೋಡಲಾಗಿದೆ. ಈ ಕೊಳವೆ ಬಾವಿಗೆ ವಿದ್ಯುತ್ ಚಾಲಿತ ಪಂಪು ಅಳವಡಿಸಿ, ನೀರು ಸರಬರಾಜನ್ನು ಆದಷ್ಟು ಶೀಘ್ರದಲ್ಲಿ ಮಾಡಲಾಗುವುದು.

ಜಿಲ್ಲಾವಾರು ಕೃಷಿ ತಾಂತ್ರಿಕ ಶಾಲೆಗಳನ್ನು ತೆರೆಯುವುದು

೧೪೭೨. ಶ್ರೀ ಎನ್. ಎಸ್. ಖೇಡ್ (ಇಂಡಿ).—ಮಾನ್ಯ ಕೃಷಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

(ಅ) ಪಶ್ಚಿಮ ಜರ್ಮನಿಯಿಂದ ಹೆಚ್ಚು ಹಾಲು ಕರೆಯುವ ಹಸುಗಳನ್ನು ನಮ್ಮ ರಾಜ್ಯಕ್ಕೆ ಆಮದು ಮಾಡಿಕೊಳ್ಳುವ ಬಗ್ಗೆ ಸರ್ಕಾರದವರ ಗಮನದಲ್ಲಿದೆಯೇ, ಹಾಗಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು ಮತ್ತು ಪ್ರತಿ ಒಂದು ಹಸುವಿನ ಬೆಲೆ ಎಷ್ಟು ?

(ಆ) ಅವುಗಳನ್ನು ನಮ್ಮ ರಾಜ್ಯಕ್ಕೆ ತಂದ ಮೇಲೆ ಅವುಗಳ ಸಾಕಾಣಿಕೆ ಹಾಗೂ ಆರೋಗ್ಯವನ್ನು ಕಾಪಾಡಲು ಏರ್ಪಾಡು ಮಾಡಲಾಗಿದೆಯೆ,